(68)

ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ಕಾರ್ಯಾಲಯ ನಾಡಕಚೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/40/2015-16. ದಿನಾಂಕ:27-06-2016.

| ವಾದಿಗಳು | ಪ್ರತಿವಾದಿಗಳು |
| --- | --- |
| ಗಿರಿಹಳ್ಳಿ ವೀರಣ್ಣ ತಂದೆ ಲೇಟ್ ಸಿದ್ದಬಸಪ್ಪ<br>ಮಂಗಾಪುರ ಗ್ರಾಮ<br>ಕೂಡ್ಲಿಗಿ ತಾಲೂಕು | ಜೆ.ಎಂ.ಚಿದಾನಂದಯ್ಯ ತಂದೆ ಬಸಲಿಂಗಯ್ಯ<br>ಮಂಗಾಪುರ ಗ್ರಾಮ<br>ಕೂಡ್ಲಿಗಿ ತಾಲೂಕು |

ಕೂಡ್ಲಿಗಿ ತಾಲೂಕು ಮಂಗಾಪುರ ಗ್ರಾಮದ ಸನಂ 133ಬಿ. ವಿಸ್ತೀರ್ಣ 5-17. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ.

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಮಂಗಾಪುರ ಗ್ರಾಮದ ಸನಂ 133ಬಿ. ವಿಸ್ತೀರ್ಣ 5-17. ಎಕ್ರೆ ಜಮೀನನ್ನು ಸದರಿ ಗ್ರಾಮದ ಗಿರಿಹಳ್ಳಿ ವೀರಣ್ಣ ತಂದೆ ಲೇಟ್ ಸಿದ್ದಬಸಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಮಂಗಾಪುರ ಇವರು ನಮೂನೆ-21 ನೋಟಿಸನ್ನು ದಿನಾಂಕ 19-03-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಜೆ.ಎಂ.ಚಿದಾನಂದಯ್ಯ ತಂದೆ ಬಸಲಿಂಗಯ್ಯ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 23/2013-14. ದಿನಾಂಕ 21-04-2014 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 01-12-2015 ರಿಂದ 27-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ತಕರಾರುದಾರರು ಗೈರು ಹಾಜರಾಗಿರುತ್ತಾರೆ. ಅರ್ಜಿದಾರರ ಪರ ನ್ಯಾಯಾವಾದಿಗಳು ಮಂಗಾಪುರ ಗ್ರಾಮದ ಸನಂ 133ಬಿ. ವಿಸ್ತೀರ್ಣ 5-17. ಎಕ್ರೆ ಜಮೀನು ಅರ್ಜಿದಾರರ ತಾತನವರಾದ ಗಿರಿಬಸಪ್ಪ ಇವರ ಹೆಸರಲ್ಲಿ ಜಂಟಿ ಪಟ್ಟಾ ಲೆಕ್ಕ ದಾಖಲೆ ಇರುತ್ತದೆ. ಇವರು ಮತ್ತು ಇವರ ಹೆಂಡತಿಯಾದ ಗಂಗಮ್ಮ ಇವರು ನಿಧನ ಹೊಂದಿರುತ್ತಾರೆ. ಹಾಗೂ ಅರ್ಜಿದಾರರ ತಂದೆಯವರಾದ ಸಿದ್ದಬಸಪ್ಪ ಇವರು ದಿನಾಂಕ 05-07-1972 ರಂದು ಹಾಗೂ ಇವರ ಹೆಂಡತಿಯಾದ ಉಜ್ಜೀನಮ್ಮ ಇವರು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಗೈರು ಹಾಜರಾಗಿದ್ದು ಅವರು ಸದರಿ ವಿವಾದಿತ ಜಮೀನನ್ನು ನಾನು ಸಾಗುವಳಿ ಮಾಡುತ್ತಿದ್ದೇನೆಂದು ಅರ್ಜಿದಾರರು ಸಿದ್ದಲಿಂಗಪ್ಪ ಎನ್ನುವ ಹೆಸರನ್ನು ದುರುಪಯೋಗ ಮಾಡಿಕೊಂಡು ಸದರಿ ಆಸ್ತೀಯನ್ನು ಲಪಾಟಾಯಿಸುವ ಉದ್ದೇಶದಿಂದ ಹಕ್ಕು ಬದಲಾವಣೆಗೆ ಅರ್ಜಿ

ಸಲ್ಲಿಸಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನಂತೆ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಆದರೆ ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

66



ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ತಕರಾರುದಾರರ ಅರ್ಜಿಯನ್ನು ಪರಿಶೀಲಿಸಲಾಗಿ ಖಾತೆದಾರರ ಪೈಕಿ ಸಿದ್ದಪ್ಪ ಮತ್ತು ಮೃತವಾರಸುದಾರರ ಹೆಸರುಗಳನ್ನು ವಂಶವೃಕ್ಷದಲ್ಲಿ ಕಾಣಿಸದೇ ಹಕ್ಕು ಬದಲಾವಣೆಗೆ ಕೋರಿ ಅರ್ಜಿ ಸಲ್ಲಿಸಿರುವುದರಿಂದ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಮಂಗಾಪುರ ಗ್ರಾಮದ ಸನಂ 133ಬಿ. ವಿಸ್ತೀರ್ಣ 5-17. ಎಕ್ರೆ ಜಮೀನಿನ ಮೃತವಾರಸುದಾರರ ಹೆಸರುಗಳನ್ನು ವಂಶವೃಕ್ಷದಲ್ಲಿ ಕಾಣಿಸದೇ ಹಕ್ಕು ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುವ ಕಾರಣ ಅರ್ಜಿದಾರರ ಕೋರಿಕೆಯನ್ನು ತಳ್ಳಿಹಾಕುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 27-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

27/6/16

ಉಪ ತಹಸೀಲ್ದಾರರು
ನಾಡಕಛೇರಿ ಹೊಸಹಳ್ಳಿ
ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಗಿರಿಹಳ್ಳಿ ವೀರಣ್ಣ ತಂದೆ ಲೇಟ್ ಸಿದ್ದಬಸಪ್ಪ. ಮಂಗಾಪುರ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ಎಂ.ಸಿದ್ದನಗೌಡ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಜೆ.ಎಂ.ಚಿದಾನಂದಯ್ಯ ತಂದ ಬಸಲಿಂಗಯ್ಯ ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.